# ಕರ್ನಾಟಕ ಲೋಕಸೇವಾ ಆಯೋಗ, `` ಉದ್ಯೋಗ ಸೌಧ '',ಬೆಂಗಳೂರು -560001

ಸಂಖ್ಯೆ: ಪಿಎಸ್ ಸಿ 1 ಆರ್ ಟಿಬಿ-2/2018 ದಿನಾಂಕ:06 -12-2018

## ಅಧಿಸೂಚನೆ

ಆಯೋಗವು ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) ನಿಯಮಗಳು 2006 ಮತ್ತು 2015ರ ತಿದ್ದುಪಡಿ ನಿಯಮಗಳನ್ವಯ ಈ ಕೆಳಕಂಡ ಹೈದ್ರಾಬಾದ್ – ಕರ್ನಾಟಕ ಪ್ರಾದೇಶಿಕ ವೃಂದದ ಗ್ರೂಪ್ "ಎ" ಮತ್ತು "ಬಿ" ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ Online ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರಮ ಸಂಖ್ಯೆ | ಇಲಾಖೆ /ಹುದ್ದೆಯ ಪದನಾಮ/ ವೇತನ ಶ್ರೇಣಿ | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|
| | **ಗ್ರೂಪ್ "ಎ" ಹುದ್ದೆಗಳು** | |
| 1 | ಕಾರ್ಮಿಕ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ಇಲಾಖೆಯಲ್ಲಿ ವಿಮಾ ವೈದ್ಯಾಧಿಕಾರಿ ₹.52,650-97,100 | 16 |
| | **ಗ್ರೂಪ್ "ಬಿ" ಹುದ್ದೆಗಳು** | |
| 2 | ತೋಟಗಾರಿಕೆ ಇಲಾಖೆಯಲ್ಲಿನ ಸಹಾಯಕ ತೋಟಗಾರಿಕೆ ಅಧಿಕಾರಿ ₹.40900-78200 | 88 |
| 3 | ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯಲ್ಲಿ ಸಹಾಯಕ ಪ್ರಧಾನ ವ್ಯವಸ್ಥಾಪಕರು ₹.43100-83900 | 01 |
| 4 | ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಮುಖ್ಯ ಗ್ರಂಥಾಲಯಾಧಿಕಾರಿ ₹.43100-83900 | 05 |
| | ಒಟ್ಟು | 110 |

**ಟಿಪ್ಪಣಿ:-** ನೇಮಕಾತಿ ಪ್ರಾಧಿಕಾರಗಳು ದೃಢೀಕರಿಸಿ ನೀಡಿರುವ ಮೇಲ್ಕಂಡ ಹುದ್ದೆಗಳ ವರ್ಗೀಕರಣದ ವಿವರಗಳನ್ನುಅನುಸೂಚಿಯಲ್ಲಿ ತೋರಿಸಲಾಗಿದೆ. ಈ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

| | |
|---|---|
| * ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | :: 17-12-2018 |
| * ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | :: 16-01-2019 |
| * ಶುಲ್ಕ ಪಾವತಿಸಲು ಕೊನೆಯ ದಿನಾಂಕ | :: 17-01-2019 |

**ಸೂಚನೆ:-** ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಚಿಸಿದಲ್ಲಿ, ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಒಂದೇ ಶುಲ್ಕವನ್ನು ಪಾವತಿಸತಕ್ಕದ್ದು.

ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದಲ್ಲಿ ಒಂದನ್ನು ಪರಿಗಣಿಸಿ ಉಳಿದ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ವಿರುದ್ಧ ಆಯೋಗವು ಕಾನೂನಿನ ಅನ್ವಯ ಸೂಕ್ತ ಕ್ರಮ ಕೈಗೊಳ್ಳುವುದು. ಒಂದು ಬಾರಿ ಅರ್ಜಿ ಸಲ್ಲಿಸಿದ ನಂತರ ಯಾವುದೇ ಬದಲಾವಣೆಗೆ ಅವಕಾಶ ಇರುವುದಿಲ್ಲ. ಬದಲಾವಣೆ ಕೋರಿ ಸಲ್ಲಿಸುವ ಮನವಿಗಳನ್ನು ತಿರಸ್ಕರಿಸಲಾಗುವುದು.

2. ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ, ಭಾವಚಿತ್ರ / ಸಹಿ / ವಯೋಮಿತಿ / ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನುಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ಯಾವುದೇ ನಾಗರೀಕ ಸೇವಾ ಕೇಂದ್ರಗಳಲ್ಲಿ(CSC) ಅಥವಾ ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್ / ಕ್ರೆಡಿಟ್ ಕಾರ್ಡ್ ಮೂಲಕ ಸಂದಾಯ ಮಾಡತಕ್ಕದ್ದು. ಶುಲ್ಕವನ್ನು ಪಾವತಿಸದ ಹಾಗೂ ದಾಖಲೆಗಳನ್ನು / ಭಾವಚಿತ್ರ / ಸಹಿಯನ್ನು ಅಪ್ಲೋಡ್ ಮಾಡದೇ ಇರುವ / ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಶುಲ್ಕವನ್ನು ನಾಗರೀಕ ಸೇವಾ ಕೇಂದ್ರಗಳಲ್ಲಿ (CSC) ಪಾವತಿಸಲು ಅವಕಾಶ ನೀಡಲಾಗಿರುವುದರಿಂದ ಅರ್ಜಿಗಳನ್ನು ಇಲ್ಲಿಯೂ ಸಹ ಸಲ್ಲಿಸಬಹುದಾಗಿದೆ.

3. ಅಭ್ಯರ್ಥಿಗಳು Online ಮೂಲಕ ಅರ್ಜಿಯನ್ನು ಭರ್ತಿ ಮಾಡುವ ವಿಧಾನಗಳನ್ನು ಕೊನೆಯಲ್ಲಿ ವಿವರಿಸಲಾಗಿದ್ದು, ಸೂಚನೆಗಳನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳತಕ್ಕದ್ದು. ಅಭ್ಯರ್ಥಿಗಳು Online ಅರ್ಜಿಯಲ್ಲಿ ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್(E-mail) ವಿಳಾಸವನ್ನು ತಪ್ಪದೇ ನಮೂದಿಸಲು ಸೂಚಿಸಿದೆ. ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಇದೇ ಮೊಬೈಲ್ ಸಂಖ್ಯೆಯನ್ನು & ಇ-ಮೇಲ್ ವಿಳಾಸವನ್ನು ಪರಿಗಣಿಸಲಾಗುವುದರಿಂದ ಅವುಗಳನ್ನು ಬದಲಾಯಿಸಲು ಅವಕಾಶ ನೀಡಲಾಗುವುದಿಲ್ಲ (Correspondance address should be metioned correctly and changes will not be allowed).

4. ಶುಲ್ಕ:-

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ₹. 600/- |
| ಪ್ರವರ್ಗ-2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳಿಗೆ | ₹. 300/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ₹. 50/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕದಿಂದ ವಿನಾಯಿತಿ ನೀಡಲಾಗಿದೆ |

5. ಅರ್ಹತಾ ಷರತ್ತುಗಳು:-

ಅ) ಭಾರತೀಯ ನಾಗರೀಕನಾಗಿರತಕ್ಕದ್ದು ಮತ್ತು ಆಧಾರ್ ಸಂಖ್ಯೆಯನ್ನು ಹೊಂದಿರಬೇಕು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

6. <u>ನೇಮಕಾತಿ ವಿಧಾನ</u>

**6.1. ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ:-**

ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006 ಮತ್ತು ತಿದ್ದುಪಡಿ ನಿಯಮ 2015 ರಲ್ಲಿ ನಿರ್ದಿಷ್ಟಪಡಿಸಲಾದಂತೆ, ಅಧಿಸೂಚಿಸಲಾಗಿರುವ ಯಾವುದೇ ತಾಂತ್ರಿಕ/ತಾಂತ್ರಿಕೇತರ ಹುದ್ದೆಗಳ ಸಂದರ್ಶನಕ್ಕೆ/ಆಯ್ಕೆಗೆ ಅರ್ಹರಾಗಲು ಅಭ್ಯರ್ಥಿಗಳು ಆಯೋಗವು ನಡೆಸುವ ಎಸ್.ಎಸ್.ಎಲ್.ಸಿ. ಮಟ್ಟದ ಕಡ್ಡಾಯ ಕನ್ನಡ ಭಾಷೆಯ 150 ಅಂಕಗಳ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳೊಂದಿಗೆ ಕಡ್ಡಾಯವಾಗಿ ತೇರ್ಗಡೆ ಹೊಂದಲೇಬೇಕು. ನಿಗದಿಪಡಿಸಿದ ಕನಿಷ್ಠ 50 ಅಂಕಗಳನ್ನು ಪಡೆಯದ ಅಭ್ಯರ್ಥಿಗಳು ಸಂದರ್ಶನಕ್ಕೆ / ಆಯ್ಕೆಗೆ ಅರ್ಹರಾಗುವುದಿಲ್ಲ (ತಿದ್ದುಪಡಿ ದಿನಾಂಕ: 07-06-2007) ಹಾಗೂ ಈ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ.

ಆದರೆ :

``ಎಸ್.ಎಸ್.ಎಲ್.ಸಿ. ಅಥವಾ ಇದಕ್ಕೆ ತತ್ಸಮಾನವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ. ಪರೀಕ್ಷೆಗಿಂತ ಮೇಲ್ಮಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ, ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಈ ಹಿಂದೆ ನಡೆಸಲ್ಪಟ್ಟ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ಅಭ್ಯರ್ಥಿಗಳು, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ಹೊಂದಿರುತ್ತಾರೆ (ತಿದ್ದುಪಡಿ ದಿನಾಂಕ: 17-04-2008, 13-12-2015 ಮತ್ತು ಸರ್ಕಾರದ ಪತ್ರ ದಿನಾಂಕ 17-04-2018)

**<u>ವಿಶೇಷ ಸೂಚನೆ:-</u>** ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಅಭ್ಯಸಿಸಿದ್ದಲ್ಲಿ ಅಥವಾ ಇತರೆ ಸಂಸ್ಥೆಗಳು ನಡೆಸುವ ಕನ್ನಡ ಭಾಷಾ ಪರೀಕ್ಷೆಗಳಲ್ಲಿ / ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದಂತಹ ಅಭ್ಯರ್ಥಿಗಳಿಗೆ ಈ ಮೇಲಿನ ವಿನಾಯಿತಿ ಪಡೆಯಲು ಅವಕಾಶ ಇರುವುದಿಲ್ಲ. ಇವರು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ತೆಗೆದುಕೊಳ್ಳಲೇಬೇಕಿರುತ್ತದೆ.

ಆಯೋಗವು ಈ ಹಿಂದೆ ನಡೆಸಿದ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಸ್ತುತ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ಪಡೆಯಲು ಅರ್ಜಿಯಲ್ಲಿನ ನಿಗದಿತ ಸ್ಥಳದಲ್ಲಿ ವಿವರಗಳನ್ನು ನಮೂದಿಸತಕ್ಕದ್ದು. ಸರಿಯಾದ ಮಾಹಿತಿ ಒದಗಿಸದಿದ್ದಲ್ಲಿ ಮೇಲಿನ ವಿನಾಯಿತಿಯನ್ನು ಪಡೆಯಲು ಅರ್ಹತೆ ನೀಡುವುದಿಲ್ಲ. ಹಾಗೂ ವಿನಾಯಿತಿ ಪಡೆಯಲು ತಪ್ಪಾಗಿ ಮಾಹಿತಿ ನೀಡಿದ ಅಭ್ಯರ್ಥಿಗಳಿಗೆ ಸಂದರ್ಶನ /ಮೂಲ ದಾಖಲಾತಿ ಪರಿಶೀಲನೆಯ ಮುನ್ನವೇ ಅನರ್ಹಗೊಳಿಸಲಾಗುವುದು. ಅಲ್ಲದೆ, ಅರ್ಜಿಯಲ್ಲಿ ಈ ಮಾಹಿತಿಯನ್ನು / ಇನ್ನಾವುದೇ ಮಾಹಿತಿಯನ್ನು ತಪ್ಪಾಗಿ ನೀಡಿದ್ದಲ್ಲಿ ನಂತರ ಅದನ್ನು ಸರಿಪಡಿಸಿಕೊಳ್ಳಲು ಅವಕಾಶ ನೀಡಲಾಗುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಎಲ್ಲಾ ವಿಷಯಗಳನ್ನು ಪರಿಶೀಲಿಸಿ, ಸರಿಯಾಗಿರುವ ಬಗ್ಗೆ ಖಚಿತಪಡಿಸಿಕೊಂಡ ನಂತರವೇ ಒಪ್ಪಿಗೆಯನ್ನು ನೀಡಬೇಕೆಂದು ಸೂಚಿಸಿದೆ.

6.2 ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) (ತಿದ್ದುಪಡಿ) ನಿಯಮಗಳು-2015 ರಂತೆ ಗ್ರೂಪ್-`ಎ' ಮತ್ತು `ಬಿ' ತಾಂತ್ರಿಕ / ತಾಂತ್ರಿಕೇತರ ಹುದ್ದೆಗಳ ನೇಮಕಾತಿಯನ್ನು ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಸಂದರ್ಶನ ಮೂಲಕ ಮಾಡಲಾಗುವುದು.

### 6.3 ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:

ಸ್ಪರ್ಧಾತ್ಮಕ ಪರೀಕ್ಷೆಯು ವಸ್ತು ನಿಷ್ಠ ಬಹು ಆಯ್ಕೆ ಮಾದರಿಯಲ್ಲಿದ್ದು ಋಣಾತ್ಮಕ ಮೌಲ್ಯಮಾಪನವಿರುತ್ತದೆ. ಪ್ರತಿ ತಪ್ಪು ಉತ್ತರಕ್ಕೆ ಪ್ರಶ್ನೆಗೆ ನಿಗದಿಪಡಿಸಿದ ಅಂಕಗಳ 0.25 (1/4th ) ರಷ್ಟು ಅಂಕಗಳನ್ನು ಕಳೆಯಲಾಗುವುದು. Competitive examination will be of Objective Multiple Choice type and there will be negative valuation. For every each question of which a wrong answer has been given by the candidate, 0.25 (1/4th ) of the marks assigned for the question will be deducted.

| ಪತ್ರಿಕೆ / Paper | ವಿಷಯ | ಅಂಕಗಳು / Marks | ಅವಧಿ / Duration ಗಂಟೆ / Hours |
|---|---|---|---|
| 1 | ಸಾಮಾನ್ಯ ಪತ್ರಿಕೆ General Paper | 200 | 1½ ಗಂಟೆ |
| 2 | ನಿರ್ದಿಷ್ಟ ಪತ್ರಿಕೆ Specific Paper | 200 | 2 ಗಂಟೆ |

**ವಿಶೇಷ ಸೂಚನೆ:-**

1. ಸಾಮಾನ್ಯ ಪತ್ರಿಕೆಯು ಪದವಿ ಮಟ್ಟದಾಗಿರುತ್ತದೆ. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪದವಿ ಮಟ್ಟದ ಒಂದೇ ಸಾಮಾನ್ಯ ಪತ್ರಿಕೆಯನ್ನು ಬರೆಯಬೇಕಿದ್ದು, ಅದರ ಫಲಿತಾಂಶವನ್ನು ಅವರು ಅರ್ಜಿ ಸಲ್ಲಿಸಿರುವ ಪದವಿ ಮಟ್ಟದ ವಿದ್ಯಾರ್ಹತೆ ಇರುವಂತಹ ಇತರೆ ಹುದ್ದೆಗಳಿಗೂ ಪರಿಗಣಿಸಲಾಗುವುದು. ಒಂದೇ ವಿದ್ಯಾರ್ಹತೆ/ನಿರ್ದಿಷ್ಟ ಪತ್ರಿಕೆಯ ಪಠ್ಯಕ್ರಮ ಇರುವಂತಹ ಹುದ್ದೆಗಳಿಗೆ ಇದೇ ಕ್ರಮವನ್ನು ಪಾಲಿಸಲಾಗುವುದು.
2. ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಮೂಲ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್ / ಡ್ರೈವಿಂಗ್ ಲೈಸೆನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ ಹಾಗೂ ಡೌನ್‌ಲೋಡ್ ಮಾಡಿರುವ ಗುರುತಿನ ಚೀಟಿಗಳು / ಇತರೆ ಯಾವುದೇ ಗುರುತಿನ ಚೀಟಿಗಳು/ ಕಲರ್ ಜೆರಾಕ್ಸ್ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ.

ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್-ಓಎಂಆರ್ ಮಾದರಿ (Offline-OMR type) ಅಥವಾ ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ (Computer based recruitment test-CBRT) ಮುಖಾಂತರ ನಡೆಸಲಾಗುವುದು. ಈ ವಿಷಯದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ (Computer based recruitment test-CBRT) ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಸೂಚನೆ:- ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮದ ವಿವರಗಳನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in/Syllabus" ಲಿಂಕ್‌ನಲ್ಲಿ ಬಿತ್ತರಿಸಲಾಗಿದೆ.

6.4 ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬೆಂಗಳೂರು / ಬೆಳಗಾವಿ / ಕಲಬುರ್ಗಿ / ಮೈಸೂರು / ಶಿವಮೊಗ್ಗ ವಿಭಾಗೀಯ ಕೇಂದ್ರಗಳಲ್ಲಿ ಅಥವಾ ಆಯೋಗವು ನಿಗದಿಪಡಿಸುವ ಇತರೆ ಯಾವುದೇ ಕೇಂದ್ರ ಸ್ಥಳದಲ್ಲಿ ನಡೆಸಲಾಗುವುದು.

ಅಭ್ಯರ್ಥಿಗಳು ಪರೀಕ್ಷೆ ತೆಗೆದುಕೊಳ್ಳಲು ಇಚ್ಛಿಸುವ ಪರೀಕ್ಷಾ ಕೇಂದ್ರವನ್ನು Online ಅರ್ಜಿಯಲ್ಲಿ ನಮೂದಿಸತಕ್ಕದ್ದು. ಆದಾಗ್ಯೂ ಪರೀಕ್ಷಾ ಕೇಂದ್ರವನ್ನು ನಿಗದಿಪಡಿಸುವುದು ಆಯೋಗದ ಅಂತಿಮ ತೀರ್ಮಾನವಾಗಿರುತ್ತದೆ.

ಸದರಿ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಏಪ್ರಿಲ್/ಮೇ 2019ರ ಮಾಹೆಯಲ್ಲಿ ನಡೆಸಲು ತಾತ್ಪೂರ್ವಿಕವಾಗಿ ನಿರ್ಧರಿಸಲಾಗಿದೆ. ವೇಳಾಪಟ್ಟಿಯನ್ನು ನಂತರದಲ್ಲಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು..

ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆಯೋಗದ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಆಯೋಗದ ವೆಬ್ ಸೈಟ್ ನಲ್ಲಿಯೂ ಬಿತ್ತರಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾತಕ್ಕದ್ದು.

ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತವೆ. ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ.

**ಟಿಪ್ಪಣಿ:-** ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

### 6.5 ಮೂಲ ದಾಖಲೆಗಳ ಪರಿಶೀಲನೆ/ಸಂದರ್ಶನ:-

ಆಯಾ ಹುದ್ದೆಗಳಿಗೆ ಸಂದರ್ಶನ / ಮೂಲ ದಾಖಲೆಗಳ ಪರಿಶೀಲನೆಯ ದಿನಾಂಕ ನಿಗದಿಪಡಿಸಿದಾಗ ಅರ್ಹತಾ ಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ ಬಿತ್ತರಿಸಲಾಗುವುದು. ಅರ್ಹ ಅಭ್ಯರ್ಥಿಗಳಿಗೆ e-mail ಮುಖಾಂತರ ಸಂದೇಶ ರವಾನಿಸಲಾಗುವುದು. ಈ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟಣೆ ಮೂಲಕ ಮಾಹಿತಿ ನೀಡಲಾಗುವುದು. ಅಲ್ಲದೇ ಸೂಚನಾ ಪತ್ರಗಳನ್ನು ಸ್ಪೀಡ್ ಪೋಸ್ಟ್ ಮೂಲಕ ರವಾನಿಸಲಾಗುವುದು. ಅಭ್ಯರ್ಥಿಗಳು ನಿಗದಿತ ದಿನಾಂಕ / ಸಮಯಕ್ಕೆ ಮೂಲ ದಾಖಲಾತಿಗಳೊಂದಿಗೆ ಪರಿಶೀಲನೆಗೆ ಸ್ವಂತ ವೆಚ್ಚದಲ್ಲಿ ಆಯೋಗದ ಕಛೇರಿಯಲ್ಲಿ ಹಾಜರಾಗತಕ್ಕದ್ದು.

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹರಾದ ನಂತರ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಶೇಕಡವಾರು ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಆಧಾರದ ಮೇಲೆ 1:3 ಅನುಪಾತದಲ್ಲಿ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ / ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

**6.6. ಸಂದರ್ಶನಕ್ಕೆ ನಿಗದಿಪಡಿಸಿದ ಗರಿಷ್ಠ ಅಂಕಗಳು:-** ಸ್ಪರ್ಧಾತ್ಮಕ ಪರೀಕ್ಷೆಗೆ ನಿಗದಿಪಡಿಸಿದ ಒಟ್ಟು ಅಂಕಗಳ ಶೇಕಡ 12.5ರಷ್ಟು ಸಂದರ್ಶನಕ್ಕೆ ನಿಗದಿಪಡಿಸಿದ ಗರಿಷ್ಠ ಅಂಕಗಳಾಗಿರುತ್ತವೆ. ಸಂದರ್ಶನ ನಡೆಸುವ ಉದ್ದೇಶ ಎಂದರೆ ಅಭ್ಯರ್ಥಿಗಳು ಆಯ್ಕೆ ಬಯಸಿದ ಹುದ್ದೆಗೆ ಅವರ ಅರ್ಹತೆ, ವ್ಯಕ್ತಿತ್ವ, ಸಂಬಂಧಿತ ವಿಷಯದಲ್ಲಿ ವ್ಯಕ್ತಪಡಿಸುವ ಸಾಮರ್ಥ್ಯತೆ, ಸೂಕ್ಷ್ಮತೆ ಮತ್ತು ಕರ್ತೃತ್ವ ಶಕ್ತಿ, ಸಾಮಾನ್ಯ ಜ್ಞಾನ ಹಾಗೂ ವಿಷಯದಲ್ಲಿನ ಪರಿಜ್ಞಾನ ಹಾಗೂ ಇನ್ನಿತರ ವಿಶೇಷ ಗುಣಗಳನ್ನು ನಿರ್ಧರಿಸುವುದಾಗಿರುತ್ತದೆ.

ಅಂತಿಮವಾಗಿ ಆಯೋಗವು ನಿಯಮಾನುಸಾರ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸಿದ ಅಂಕಗಳ ಶೇಕಡವಾರು ಜೇಷ್ಠತೆಯನ್ನು ಆಧರಿಸಿ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಗಳನುಸಾರ ಹುದ್ದೆಗಳ ನೇಮಕಾತಿಗಾಗಿ ಇರುವ ಮೀಸಲಾತಿಯನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತದೆ.

**7. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-**

**7 (1) ಶೈಕ್ಷಣಿಕ ವಿದ್ಯಾರ್ಹತೆ:-** ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿ-2ರಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು.

**7 (2) ವಯೋಮಿತಿ:-**

ಕನಿಷ್ಠ - 18 ವರ್ಷಗಳು
ಗರಿಷ್ಠ – 35 ವರ್ಷಗಳು
ಪ್ರವರ್ಗ- 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ 38 ವರ್ಷಗಳು
ಪ.ಜಾ, ಪ.ಪಂ., ಪ್ರವರ್ಗ-1ರ ಅಭ್ಯರ್ಥಿಗಳಿಗೆ 40 ವರ್ಷಗಳು

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಆ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| (ಇ) | National Cadet Corps ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಉ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಋ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟು ಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು). | 10 ವರ್ಷಗಳು |

| | | |
|---|---|---|
| (ಋ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

## 8. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:-

ಮೀಸಲಾತಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರತಕ್ಕದ್ದು:-

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು – ನಮೂನೆ `ಡಿ '

ಆ) ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳು – ನಮೂನೆ `ಇ '

ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು – ನಮೂನೆ `ಎಫ್ '

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳು ಪಡೆದಿರುವ / ಪಡೆಯುವ ಮೀಸಲಾತಿ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಈ ಪ್ರವರ್ಗಗಳ ಅಭ್ಯರ್ಥಿಗಳು ಪಡೆದಿರುವ ಮೀಸಲಾತಿ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತ್ವವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು.

## 9. ಮಾಜಿ ಸೈನಿಕ

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ 01-04-1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ 21-10-1995 ರನ್ವಯ ನೇರ ನೇಮಕಾತಿಗಳಲ್ಲಿ ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

(1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ, ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು

ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

1) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ, ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ಹಾಗೂ ಶುಲ್ಕ ವಿನಾಯಿತಿಯನ್ನು ನೀಡಲಾಗುವುದಿಲ್ಲ.

ವಿವರಣೆ:- ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇವೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇವೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು / ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೆ ಹಾಜರುಪಡಿಸಬೇಕು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

## 10. <u>ಗ್ರಾಮೀಣ ಅಭ್ಯರ್ಥಿ:-</u>

ಸರ್ಕಾರಿ ಅಧಿಸೂಚನೆ ಸಂಖ್ಯೆ: ಶಾಇ 59 ಶಾಸನ 2000, ದಿನಾಂಕ:06-01-2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ:13-02-2001 ರನ್ವಯ ನಮೂನೆ-2ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ

ಶಿಕ್ಷಣಾಧಿಕಾರಿಯವರ ಮೇಲುರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರ ಹಾಗೂ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಜಾರಿ ಮಾಡಿದ ದಿನಾಂಕದೊಂದಿಗೆ ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

## 11. ಕನ್ನಡ ಮಾಧ್ಯಮ ಅಭ್ಯರ್ಥಿ:-

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ:24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

## 12. ಅಂಗವಿಕಲ ಅಭ್ಯರ್ಥಿ:-

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ:03-09-2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-`ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಅಥವಾ ಅದಕ್ಕಿಂತ ಹೆಚ್ಚು ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು.

ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005 ದಿನಾಂಕ:19-11-2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ:18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರದಿಂದ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

**13. ಅನುಚ್ಛೇಧ 371 (ಜೆ) ರಂತೆ ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:-**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ-ಎ ಯಲ್ಲಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಳ್ಳತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ಈ ಪ್ರಮಾಣ ಪತ್ರದ ನಮೂನೆಯನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು. ಹೈದ್ರಾಬಾದ್ – ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳು ರಾಜ್ಯ ವೃಂದಕ್ಕೆ ಸೇರಿದ ಹುದ್ದೆಗಳಿಗೂ ಅರ್ಹತೆ ಇದ್ದಲ್ಲಿ ಪರಿಗಣಿಸಲಾಗುವುದು.

**14. ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ ಹೈದರಾಬಾದ್ - ಕರ್ನಾಟಕ ಮೀಸಲಾತಿ:-**

ಸರ್ಕಾರಿ ಸೇವೆಯಲ್ಲಿರುವ ನೌಕರರು ದಿನಾಂಕ 29-01-2014 ರಂದು ಹೊರಡಿಸಲಾದ ಅಧಿಸೂಚನೆ-1 ಸಂಖ್ಯೆ ಡಿಪಿಎಆರ್ 43 ಹೆಚ್‌ಕೆಸಿ 2013 ರಲ್ಲಿನ ಅನುಬಂಧ-ಎ ನಲ್ಲಿ ಇರುವಂತೆ ತಮ್ಮ ಸೇವಾ ಪುಸ್ತಕದಲ್ಲಿ ದಿನಾಂಕ:01-01-2013 ಕ್ಕಿಂತ ಮುಂಚಿನ ನಮೂದಿನಲ್ಲಿ ಅವರ ಸ್ವಂತ ಊರು ಅಥವಾ ಸ್ಥಳಕ್ಕೆ ಸಂಬಂಧಿಸಿದಂತೆ ಹೈದರಾಬಾದ್ - ಕರ್ನಾಟಕ ಪ್ರದೇಶದ ಜಿಲ್ಲೆಗಳಾದ ಬೀದರ್, ಕಲಬುರ್ಗಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ಯಾದಗಿರಿ ಕಂದಾಯ ಜಿಲ್ಲೆಗಳ ಅಡಿಯಲ್ಲಿ ಬರುವಂತಹ ಪ್ರದೇಶದ ನಮೂದು ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳು ಕಛೇರಿ ಮುಖ್ಯಸ್ಥರಿಂದ ದಿನಾಂಕ:29-01-2014ರ ಅಧಿಸೂಚನೆ-1 ರಲ್ಲಿನ ನಿಯಮ 5(2) ರಲ್ಲಿ ನೀಡಲಾದ ಸ್ವಗ್ರಾಮ ಪ್ರಮಾಣ ಪತ್ರವನ್ನು ಆಧರಿಸಿ ಅಂತಹವರ ಅರ್ಜಿಯನ್ನು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗೆದುರಾಗಿ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರದ ನಮೂನೆಯನ್ನು ಅನುಬಂಧ-ಎ ರಲ್ಲಿ ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

**14. ಸೇವಾ ನಿರತ**

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 5(4) ರನ್ವಯ "ಯಾರೇ ಅರ್ಜಿದಾರನು ತಾನು ಅರ್ಜಿ ಸಲ್ಲಿಸುವ ಸಮಯದಲ್ಲಿ ಸರ್ಕಾರದ ಯಾವುದೇ ಇಲಾಖೆಯಲ್ಲಿ ಅಥವಾ ಯಾವುದೇ ಇತರೆ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಈ ಸಂಬಂಧವಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಯಾವುದೇ ಇತರೆ ಪ್ರಾಧಿಕಾರದಲ್ಲಿ ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದರೆ ಮತ್ತು ಆತನು ಯಾರ ಅಧೀನದಲ್ಲಿ ಉದ್ಯೋಗದಲ್ಲಿರುವನೋ ಆ ಇಲಾಖಾ ಮುಖ್ಯಸ್ಥರಿಂದ ಅಥವಾ ಸಂದರ್ಭಾನುಸಾರ ಸರ್ಕಾರದಿಂದ ಅಥವಾ ಪ್ರಾಧಿಕಾರದಿಂದ ಒಪ್ಪಿಗೆ ಪಡೆಯದೆಯೇ ಅರ್ಜಿಯನ್ನು ಸಲ್ಲಿಸಿದ್ದರೆ ಆತನು ಸರ್ಕಾರದ ಯಾವುದೇ ಇಲಾಖೆಯಲ್ಲಿನ ಹುದ್ದೆಯ ನೇಮಕಕ್ಕೆ ಅರ್ಹರಾಗುವುದಿಲ್ಲ. ಪರಂತು, ಈ ಉಪ ನಿಯಮವು ಸರ್ಕಾರದ ಯಾವುದೇ ಇಲಾಖೆಯಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ನೇಮಕಗೊಂಡಿರುವ ವ್ಯಕ್ತಿಗೆ ಅವನನ್ನು ಎಲ್ಲಿಯವರೆಗೆ ಹಾಗೆಂದು ಪರಿಗಣಿಸಲಾಗುವುದೋ ಅಲ್ಲಿಯವರೆಗೆ ಅನ್ವಯವಾಗುವುದಿಲ್ಲ.

ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಸಕ್ಷಮ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪ್ರಮಾಣ ಪತ್ರವನ್ನು (NOC) ಪಡೆದಿಟ್ಟುಕೊಂಡಿರತಕ್ಕದ್ದು. ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಮೂಲ ದಾಖಲಾತಿಗಳ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (NOC) ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ

ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು. ಕ್ರೋಢೀಕೃತ ನಿರಾಕ್ಷೇಪಣಾ ಪ್ರಮಾಣ ಪತ್ರ ಪಡೆದಂತಹ ಅಭ್ಯರ್ಥಿಗಳು ಅವರ ನೇಮಕಾತಿ ಪ್ರಾಧಿಕಾರದ ಸಹಿ / ಮೊಹರಿನೊಂದಿಗೆ ದೃಢೀಕರಣ ಪತ್ರವನ್ನು ಸಲ್ಲಿಸಬೇಕು. ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.

## 16. ಆಯೋಗದೊಡನೆ ಪತ್ರ ವ್ಯವಹಾರ:

ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು.

## 17. ಪ್ರಾಮುಖ್ಯವಾದ ಸೂಚನೆಗಳು:-

ಅಭ್ಯರ್ಥಿಯ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಹಾಗೂ ಕಪ್ಪು ಶಾಹಿಯ ಸ್ಕೆಚ್ / ಮಾರ್ಕರ್ ಪೆನ್ನಲ್ಲಿ ಸಹಿಯನ್ನು ನಿಗದಿಪಡಿಸಿದ ಅಳತೆಯಲ್ಲಿ ಸ್ಕಾನ್ ಮಾಡಿ ಅರ್ಜಿಗೆ Upload ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು Upload ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ Online ಮೂಲಕ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಮೀಸಲಾತಿ, ಜನ್ಮ ದಿನಾಂಕದ ದಾಖಲೆ, ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲೆಗಳನ್ನು ಮತ್ತು NOC ಯನ್ನು Upload ಮಾಡಬೇಕು. ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣ ಪತ್ರದ ಹಾಗೂ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಹೈದ್ರಾಬಾದ್-ಕರ್ನಾಟಕ ಹಾಗೂ ಪ.ಜಾ, ಪ.ಪಂ, ಪ್ರವರ್ಗ-1 ರ ಮೀಸಲಾತಿಯ ಪ್ರಮಾಣ ಪತ್ರಗಳನ್ನು ಹೊರತುಪಡಿಸಿ ಇತರೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

1) ಆಧಾರ್ ಕಾರ್ಡ್
2) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಅಂಚೆ ಕಛೇರಿಯಲ್ಲಿ ಪಾವತಿಸಿದ ಚಲನ್ / ವಿವರದ ಪ್ರತಿ. (ಶುಲ್ಕ ವಿನಾಯಿತಿ ಇರುವವರನ್ನು ಹೊರತುಪಡಿಸಿ)
3) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಪಡೆದಿರುವ ಬಗ್ಗೆ ಎಲ್ಲಾ ವರ್ಷಗಳ / ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರಗಳು /ಪಿಡಿಸಿ/ ಗ್ರೇಡ್‌ನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿದ ವಿಶ್ವವಿದ್ಯಾಲಯದಿಂದ ಪಡೆದ ಪ್ರಮಾಣ ಪತ್ರ
4) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ /ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
5) ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ / ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ ಅನುಬಂಧದಲ್ಲಿರಿಸಿರುವ ನಮೂನೆಯಲ್ಲಿ(ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
6) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)

7) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಸಾಮಾನ್ಯ ಅರ್ಹತೆ / ಗ್ರಾಮೀಣ ಮೀಸಲಾತಿ ಕೋರಿದ ಅಭ್ಯರ್ಥಿಗಳು) (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ ಪ್ರವರ್ಗ-3ಎ / ಪ್ರವರ್ಗ-3ಬಿ ಮೀಸಲಾತಿಯೊಂದಿಗೆ ಗ್ರಾಮೀಣ ಮೀಸಲಾತಿ ಕೋರಿದ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ.)

8) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

9) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

10) ಹೈದರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

11) ಸ್ವಗ್ರಾಮ ಪ್ರಮಾಣ ಪತ್ರ (ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಹೈದರಾಬಾದ್-ಕರ್ನಾಟಕ ಮೀಸಲಾತಿ ಕೋರಿದ್ದಲ್ಲಿ)

12) ಸರ್ಕಾರಿ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ನಿರಾಕ್ಷೇಪಣಾ / ಸೇವಾ ಪ್ರಮಾಣ ಪತ್ರ.

13) ಸೇವಾ ದೃಢೀಕರಣ ಪತ್ರ (ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊ.ದೇ.ವಸತಿ ಶಾಲೆಗಳಲ್ಲಿ/ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರಾಂಶುಪಾಲರು / ಉಪನ್ಯಾಸಕರ ಹುದ್ದೆಗಳಿಗೆ ಕೃಪಾಂಕ/ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ)

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ನೀಡುವ ಮಾಹಿತಿಯ ಆಧಾರದ ಮೇಲೆ ತಾತ್ಕಾಲಿಕ ಅರ್ಹರೆಂದು ಪರಿಗಣಿಸಿ ಸ್ಪರ್ಧಾತ್ಮಕ ಪರೀಕ್ಷೆಗೆ ಅವಕಾಶ ನೀಡಲಾಗುವುದು. ಆದ್ದರಿಂದ ಅರ್ಜಿ ಸಲ್ಲಿಸುವಾಗ ಅರ್ಜಿಯಲ್ಲಿ ಕೋರಿರುವ ಅಗತ್ಯ ದಾಖಲೆಗಳಾದ ಜನ್ಮ ದಿನಾಂಕ, ಕೋರಿರುವ ಮೀಸಲಾತಿಗಳು, ವಿದ್ಯಾರ್ಹತೆ , NOC ಇತ್ಯಾದಿ ದಾಖಲೆಗಳನ್ನು ಕಡ್ಡಾಯವಾಗಿ ಅಪ್ಲೋಡ್ ಮಾಡತಕ್ಕದ್ದು ಹಾಗೂ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಮುಂದಿನ 03 ವರ್ಷಗಳು ಆಯೋಗವು ನಡೆಸುವ ಯಾವುದೇ ನೇಮಕಾತಿ / ಪರೀಕ್ಷೆಗಳನ್ನು ಬರೆಯದಂತೆ ನಿರ್ಬಂಧ ವಿಧಿಸಲಾಗುವುದು. ಆದುದರಿಂದ ಅರ್ಜಿ ಸಲ್ಲಿಸುವ ಮುನ್ನ ಅವರು ನೀಡಿರುವ ಎಲ್ಲಾ ಮಾಹಿತಿಯು ಸರಿಯಾಗಿದೆ ಎಂದು ಖಚಿತಪಡಿಸಿಕೊಂಡು ದೃಢೀಕರಣ ನೀಡುವಾಗ ಎಚ್ಚರ ವಹಿಸಬೇಕು.

18. ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಮ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ-1 | ಪ್ರವರ್ಗ-1 | Cat – 1 | Category – I |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | EXMP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ. | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ | PH | Physically Handicapped Person |
| ಹೈ.ಕ | ಹೈ.ಕ.ಪ್ರಾದೇಶಿಕ ವೃಂದ | HK | Hyderabad Karnataka Local Cadre |

19. **ವಿಶೇಷ ಸೂಚನೆಗಳು:**

